# KEY ANSWER

ವಿಷಯ : ಕನ್ನಡ **ಕನ್ನಡದ ಮಾದರಿ ಪ್ರಶ್ನೆ ಪತ್ರಿಕೆ 1** ಅಂಕಗಳು : 40

ತರಗತಿ: ೧೦ನೇ ಸಮಯ : 1.5 ಗಂಟೆಗಳು

**I.**

೧. ಮತಂಗಾಶ್ರಮದಲ್ಲಿ ವಾಸವಿದ್ದ ತಪಸ್ವಿನಿ ಶಬರಿ.

೨. ನೆಲ್ಸನ್‌ರವರ ಮೂರ್ತಿಯಿರುವ ಸ್ಥಳದ ಹೆಸರು – ಟ್ರಾಫಲ್ಗಾರ್ ಸ್ಕ್ವೇರ್.

೩. ರಾಜಮನೆತನದಲ್ಲಿ ಹುಟ್ಟಿದವರ ಕಿವಿ ಅಹಂಕಾರದಿಂದ ಕಿವುಡಾಗಿರುತ್ತದೆ. ಎಂಥ ಉಪದೇಶವೂ ಅವರ ಕಿವಿಗೆ ನಾಟುವುದಿಲ್ಲ.

೪. ವಿಶ್ವೇಶ್ವರಯ್ಯ ಅವರ ಹುಟ್ಟು ಹಬ್ಬದ ನೆನಪಿಗಾಗಿ 'ಎಂಜಿನೀರ್ ದಿನಾಚರಣೆ' ಯನ್ನು ಮಾಡಲಾಗುತ್ತಿದೆ.

೫. ಗುರುಪೂರ್ಣಿಮಾ ದಿನದಂದು ಲೇಖಕರು ಧ್ವಜವನ್ನೇ ಗುರುವೆಂದು ಭಾವಿಸಿ, ಧ್ವಜವನ್ನು ಪೂಜಿಸುತ್ತಾರೆ.

**II.**

೬. ಹೆಣ್ಣು–ಹೆಸರುಗಳಿಗಾಗಿ ಸೆಣಸಿ ಹೆಣಗುತ್ತಿರುವ ಮಾನವ ಸಹಜವಾಗಿ ಲೋಭಿ. ಪ್ರಕೃತಿ ಅವನಿಗೆ ಹೇಳಿಕೊಟ್ಟಿದ್ದೇ ಇಂಥ ಜಿಪುಣತನವನ್ನು. ಬಾಳು ಹಸನಾಗಬೇಕಾದರೆ ಇದನ್ನು ಕೆಲಮಟ್ಟಿಗಾದರೂ ಮೀರಬೇಕು.

೭. ಧರ್ಮಾಧಿಕರಣ ರು ವಟವೃಕ್ಷಕ್ಕೆ"ನೀನಾದರೋ ಯಕ್ಷಾದಿ ದಿವ್ಯ ದೇವತೆಗಳಿಗೆ ವಾಸಸ್ಥಾನವು ಮತ್ತು ಅವರ ಸೇವೆಯನ್ನು ಮಾಡುವಂತಹ ವೃಕ್ಷವೂಆಗಿದ್ದೀಯಾ, ಆ ಕಾರಣದಿಂದ ನಿನ್ನನ್ನು ಸಾಕ್ಷಿ ಮಾಡಿ ಕೇಳುವೆವು, ನೀನು ತಪ್ಪದೆ ಸಾಕ್ಷಿಯನ್ನು ನುಡಿ"ಎಂದು ಹೇಳಿದರು.

೮. ಮುಂಗಾರಿನ ಮಳೆಯಾದಾಗ ಪ್ರಕೃತಿ ಹಚ್ಚಹಸಿರಿನಿಂದ ಕಂಗೊಳಿಸುತ್ತದೆ. ವಸಂತನಕಾಲದ ಆಗಮನ ಬರಡಾಗಿರುವ ಕಾಡು ಮೇಡುಗಳಲ್ಲಿ ಮರಗಿಡಗಳು ಸಮೃದ್ಧವಾಗಿ ಚಿಗುರಿ ಪ್ರಕೃತಿಗೆ ನವಚೈತನ್ಯದ ರೀತಿಯಲ್ಲಿ ಮುಟ್ಟಬೇಕಾಗಿದೆ.

೯. ಕಾಲವೆಂಬ ಹಕ್ಕಿ ದಿಶಾವಲಯದ (ದಶದಿಕ್ಕುಗಳ ತುದಿ) ತುತ್ತತುದಿಗೆ ಮುಟ್ಟಿದೆ. ದಿಶಾವಲಯದ ಆಚೆಗೆ ತನ್ನಯ ಚುಂಚವನ್ನು ಚಾಚಿದೆ. ಜಗತ್ತಿನಮೂಲವನ್ನು ಒಡೆಯಲು, ಪ್ರಪಂಚದ ವಿಸ್ಮಯವನ್ನು ಭೇಧಿಸಲು ಎಂಬಂತೆ ಹೊಂಚುಹಾಕಿದೆ.

೧೦. ಹೆಬಲಕ ಸಾಹೇಬನ ಬುದ್ಧಿಮಾತಿಗೆ ವಿರೋಧವಾಗಿ ಜಡಗ ಇವರನ್ನು ಹೊಡಿಯಿರಿ , ಇವರು ಸಂಪೂರ್ಣವಾಗಿ ಮೋಸಗಾರರು, ವಿಶ್ವಾಸವಚಕರು ಇವರ ಮೇಲೆ ನಂಬಿಗೆ ಇಲ್ಲ. ಒಳಸಂಚಿನಿಂದ ಮೋಸಮಾಡಿ ನಮ್ಮ ದೇಶ ಗೆಲ್ಲುತ್ತಾರೆ. ಮುಂದೆ ನಮಗೆ ಆಪತ್ತು ಕಾದಿದೆ ಎಂದು ಹೇಳುತ್ತಾನೆ.

**III.**

೧೧. ಸಂದರ್ಭ : – ಕೃಷ್ಣನು ಪಾಂಡವ ಕೌರವರ ನಡುವೆ ಸಂಧಿ ಮಾಡಲು ಹೋಗಿ , ವಿಫಲವಾಗಿ ಹಿಂದಿರುಗುವಾಗ ಕರ್ಣನನ್ನು ಜೊತೆಯಲ್ಲಿ ಕರೆದುಕೊಂಡು ಬಂದು , ಮೈದುನತನದ ಸರಸದಲ್ಲಿ ಮಾತನಾಡಿಸುವ ಸಂದರ್ಭದಲ್ಲಿ ಈ ಮಾತನ್ನು ಕರ್ಣನು ಕೃಷ್ಣನಿಗೆ ಹೇಳುತ್ತಾನೆ . ಸ್ವಾರಸ್ಯ : – ಕರ್ಣನು ಮುಂದೆ ನಡೆಯುವ ಮಹಾಭಾರತ ಕುರುಕ್ಷೇತ್ರ ಯುದ್ಧದ ಭೀಕರತೆಯನ್ನು ಈ ಮಾತಿನಲ್ಲಿ ಬಹು ಸ್ವಾರಸ್ಯಪೂರ್ಣವಾಗಿಹೇಳುತ್ತಾನೆ .

೧೨. ಆಯ್ಕೆ : ಈ ವಾಕ್ಯವನ್ನು ಕುವೆಂಪು ಅವರ ' ಪಕ್ಷಿಕಾಶಿ ' ಕವನ ಸಂಕಲನದಿಂದ ಆರಿಸಲಾಗಿರುವ ' ಹಸುರು ' ಎಂಬ ಪದ್ಯದಿಂದ ತೆಗೆದುಕೊಳ್ಳಲಾಗಿದೆ .

ಸಂದರ್ಭ : ಅಶ್ವಿಜ ಮಾಸದಲ್ಲಿ ಬತ್ತದ ಗದ್ದೆಗೆ ಮುತ್ತುವ ಗಿಳಿಗಳ ಹಸುರು ಬಣ್ಣದ ನೋಟ ; ಅದರ ಪಕ್ಕದಲ್ಲೇ ಕಾಡಂಚಿನಲ್ಲಿ ಫಲಭರಿತ ಅಡಕೆಯ ತೋಟ ; ಹುಲ್ಲಿನ ಮಕಮಲ್ಲಿನ ಹೊಸಪಚ್ಚೆಯ ಜಮಖಾನೆ ಹರಡಿದಂತೆ ಭೂಮಿಯು ಹಸುರಿನಿಂದ ಮೈ ಮುಚ್ಚಿರುವ ಬಗೆಯನ್ನು ವರ್ಣಿಸುವ ಸಂದರ್ಭದಲ್ಲಿ ಕವಿ ಈ ಮಾತನ್ನು ಹೇಳಿದ್ದಾರೆ .

ಸ್ವಾರಸ್ಯ : ಭೂಮಿಯ ಮೇಲೆ ಎಲ್ಲೆಂದರಲ್ಲಿ ವಿವಿಧ ರೂಪದಲ್ಲಿ ಹಸುರು ಪಸರಿಸಿರುವುದನ್ನು ನೋಡಿ ರಸಾನಂದ ಹೊಂದಿದ ಕವಿ ' ಬೇರೆ ಬಣ್ಣಗಳೇ ಕಾಣದಾದವು ' ಎಂದು ಹೇಳಿರುವಲ್ಲಿ ಅವರ ರಸಾಸ್ವಾದನೆಯ ಔನ್ನತ್ಯವನ್ನು ಸ್ವಾರಸ್ಯಪೂರ್ಣವಾಗಿ ಅಭಿವ್ಯಕ್ತಪಡಿಸಿರುವುದನ್ನು ಕಾಣಬಹುದಾಗಿದೆ .

೧೩. ಆಯ್ಕೆ : ಈ ವಾಕ್ಯವನ್ನು ಮಹಾಕವಿ ರನ್ನ ಬರೆದಿರುವ ' ಸಾಹಸ ಭೀಮ ವಿಜಯ ' ಎಂಬ ಕೃತಿಯಿಂದ ಆರಿಸಲಾಗಿರುವ ' ಛಲಮನೆ ಮೆಲವೆಂ ' ಎಂಬ ಪದ್ಯಭಾಗದಿಂದ ಆರಿಸಿಕೊಳ್ಳಲಾಗಿದೆ .

Downloaded from scoringtarget.com

ಸಂದರ್ಭ : “ ನನ್ನ ಒಡ ಹುಟ್ಟಿದ ನೂರುಮಂದಿ ಸಹೋದರರು ಹೋರಾಡಿ ಸತ್ತರು . ಆದ್ದರಿಂದ ನನ್ನಲ್ಲಿ ಕೋಪ ಹುಟ್ಟಿ ಬೆಳೆಯಿತು . ಸತ್ತವರೇನು ಮತ್ತೆ ಹುಟ್ಟುವುದಿಲ್ಲವೇ ? ಆದ್ದರಿಂದ ಪಾಂಡವರೊಡನೆ ಹೋರಾಡಿ ನನ್ನ ಛಲವನ್ನೇ ಮೆರೆಯುತ್ತೇನೆ . ಎಂದು ಹೇಳುವ ಸಂದರ್ಭದಲ್ಲಿ ಈ ಮಾತನ್ನು ಹೇಳುತ್ತಾನೆ .

ಸ್ವಾರಸ್ಯ : ದುರ್ಯೋಧನನ ತನಗೆ ಕೋಪ ಹೆಚ್ಚಾಗಲು ಕಾರಣವನ್ನು ನೀಡಿರುವುದಲ್ಲದೆ ತನ್ನ ಸಹೋದರರು ಸತ್ತಿಲ್ಲ . ಅವರು ಮತ್ತೆ ಹುಟ್ಟಿಬರುವರೆಂಬ ನಂಬಿಕೆಹೊಂದಿರುವುದು ಹಾಗೂ ಛಲಕ್ಕಾಗಿ ಹೋರಾಡುವ ಆತನ ನಿಲುವು ಇಲ್ಲಿ ಸ್ವಾರಸ್ಯಪೂರ್ಣವಾಗಿ ವ್ಯಕ್ತವಾಗಿದೆ .

**IV.** ೧೪. ಲಂಡನ್ ನಗರ ವೀಕ್ಷಣೆಯಲ್ಲಿ ಲೇಖಕರು ಲಂಡನ್ ನಗರದ ವ್ಯಾಪಾರ , ಟ್ರಾಮ್ ಬಸ್ಸುಗಳು ಗರ್ಭದಲ್ಲಿ

ಓಡಾಡುವವ್ಯವಸ್ಥೆ ಮತ್ತು ಹತ್ತಿ ಇಳಿಯಲು ಇರುವ ಎಸ್ಕಲೇಟರ್ಸ್ ಕುರಿತು ಗುರುತಿಸಿದ್ದಾರೆ. ನಂತರ ಪೇಟೆಯಲ್ಲಿನ ವೂಲವರ್ಥ ಎಂಬ ಸ್ಟೇಷನರಿ ಅಂಗಡಿ. ಈ ಅಂಗಡಿಯಲ್ಲಿ ಸಿಗುವ ಬೂಟು, ಸಾಬೂನು, ಪುಸ್ತಕ , ಹೂವು , ಯುದ್ದ ಸಾಮಾಗ್ರಿಗಳು ಮುಂತಾದ ವಸ್ತುಗಳನ್ನು ಹೆಸರಿಸಿದ್ದಾರೆ. ಆನಂತರ ಸೂಟು ಹೊಲಿಯುವ ಸಿಂಪಿಗಳ ಬಗ್ಗೆ ವಿವರಿಸಿದ್ದಾರೆ. ಲಂಡನ್ನಿನ ಹೆಣ್ಣು ಮಕ್ಕಳು ಮಾಣಿ , ಟೈಪಿಸ್ಟ, ಕಾರಕೂನ ಮುಂತಾದ ಕೆಲಸದಲ್ಲಿ ನಿಯುಕ್ತರಾಗಿರುತ್ತಾರೆ ಎಂಬುದನ್ನು ಗುರುತಿಸಿದ್ದಾರೆ.

ಹೆಣ್ಣು ಮಕ್ಕಳವೈವಿಧ್ಯಮಯ ಟೊಪ್ಪಿಗೆಯ ವಿಶೇಷತೆಯನ್ನು ಕುರಿತು ಒಂದು ಟೊಪ್ಪಿಗೆಯಂತೆ ಇನ್ನೊಂದಿರುವುದಿಲ್ಲ. ಸಿ ಕ್ಕಿಸಿದ ಪುಚ್ಛವಾದರೂಕನಿಷ್ಟ ಬೇರೆಯಾಗಿರುತ್ತದೆ ಎಂಬುದನ್ನು ಗುರುತಿಸಿದ್ದಾರೆ. ‘ವೆಸ್ಟ ಮಿನ್‌ಸ್ಟರ್ ಅಬೆ’ಎಂಬ ಪ್ರಾರ್ಥನಾ ಮಂದಿರ ಒಂದು ವಿಶೇಷ ಸ್ಮಾರಕ. ಇದು ಸತ್ತಿರುವ ಸಂತರ, ಸಾರ್ವಭೌಮರ ಹಾಗೂ ಕವಿಪುಂಗವರ ಸ್ಮಾರಕವಾಗಿದೆ. ಸಾಮ್ರಾಟರ ರಾಜ್ಯಾಭಿಷೇಕವಾಗುವ ಸಿಂಹಾಸದ ಮೇಲಿರುವ ಕಲ್ಲುಪಾಟಿ ಹಾಗೂ ಈ ಕಲ್ಲುಪಾಟಿ ಎಂಬ ಶಿಲೆಯನ್ನೊಳಗೊಂಡ ರಾಜರ ಸಿಂಹಾಸನ ಸ್ಟೋನ್ ಆಫ್ ಸ್ಕೋನ್ ಮುಂತಾದವುಗಳ ವಿಶೇಷತೆಯನ್ನು ಗುರುತಿಸಿದ್ದಾರೆ.

೧೫. ದ್ರುಣ ಮತ್ತು ದುಪದರಿಬ್ಬರೂ ಯಜ್ಞಸೇನನೆಂಬ ಗುರುವಿನಲ್ಲಿ ಸಹಪಾಠಿಗಳಾಗಿ ವಿದ್ಯಾಭ್ಯಾಸ ಮಾಡಿದರು . ದ್ರುಪದನು ತಾನು ದೊರೆಯಾದಾಗ ತನ್ನ ಬಳಿಕ ಬಂದರೆ ಸಹಾಯಮಾಡುವುದಾಗಿ ದ್ರೋಣನಿಗೆ ಹೇಳಿದನು . ಇಬ್ಬರ ವಿದ್ಯಾಭ್ಯಾಸ ಮುಗಿದ ನಂತರ ದುಪದನು ಛತ್ರಾವತಿಯಲ್ಲಿ ರಾಜನಾಗಿ ಆಳುತ್ತಿದ್ದನು . ಆಸಮಯದಲ್ಲಿ ದ್ರೋಣನಿಗೆ ಬಹಳ ಬಡತನ ಉಂಟಾಯಿತು . ಆಗ ಅವನು ದ್ರುಪದನು ವಿದ್ಯಾಭ್ಯಾಸ ಮಾಡುವ ಸಮಯದಲ್ಲಿ ಆಡಿದ್ದ ಮಾತುಗಳನ್ನು ಜ್ಞಾಪಿಸಿಕೊಂಡು ಸಹಾಯವನ್ನು ನಿರೀಕ್ಷಿಸಿ ದ್ರುಪದನಲ್ಲಿಗೆ ಬಂದನು . ಆದರೆ ದ್ರುಪದನಿಗೆ ಅಧಿಕಾರಮದ ಆವರಿಸಿತ್ತು . ದೋಣ ತನ್ನ ಸಹಪಾಠಿ ಎಂದು ಗುರುತಿಸದಾದನು . ದ್ರೋಣನು ದ್ರುಪದನರಮನೆಯ ಬಾಗಿಲಲ್ಲಿ ನಿಂತು ಬಾಗಿಲು ಕಾಯುವವನನ್ನು ಕರೆದು ನಿಮ್ಮ ಜೊತೆಯಲ್ಲಾಟವಾಡಿದ ಸ್ನೇಹಿತನಾದ ದ್ರೋಣನೆಂಬ ಬ್ರಾಹ್ಮಣನು ಬಂದಿದ್ದಾನೆಂದು ನಿಮ್ಮ ರಾಜನಿಗೆ ತಿಳಿಯಪಡಿಸು ಹೇಳಿ ಕಳುಹಿಸಿದಾಗ ದ್ರುಪದನು ಅವನಾರೋ ನನಗೆ ತಿಳಿದಿಲ್ಲ . ಅವನನ್ನು ಹೊರಕ್ಕೆ ತಳ್ಳು ‘ ಎಂದು ಆದೇಶಿಸಿದನು . ಆದರೆ ದೋಣನು ಬಲವಂತವಾಗಿ ಒಳಕ್ಕೆ ನುಗ್ಗಿ ಬಂದು ದಪದನಿಗೆ ತಮ್ಮಿಬ್ಬರೂ ಸಹಪಾಠಿಗಳಾಗಿದ್ದ ಸಂದರ್ಭವನ್ನು ಹೇಳಿದಾಗ ದ್ರುಪದನು “ ನೀನಾರೋ ನನಗೆ ತಿಳಿದಿಲ್ಲ. ನೀನು ನನ್ನನ್ನು ಅದೆಲ್ಲಿ ಕಂಡಿದ್ದೆಯೊ ? ರಾಜನಿಗೂ ಬ್ರಾಹ್ಮಣನಿಗೂ ಯಾವ ವಿಧವಾದ ಸ್ನೇಹ ? ಮನುಷ್ಯರಾದವರು ಇಷ್ಟು ನಾಚಿಕೆಗೆಟ್ಟವರೂ ಆಗುತ್ತಾರೆಯೇ ? ” ಎಂದು ಹೀಯಾಳಿಸಿ ಮಾತನಾಡಿದ್ದನ್ನು ಕೇಳಿ ಕೋಪಗೊಂಡ ದೋಣನು “ ಜೊತೆಯಲ್ಲಿ ವಿದ್ಯಾಭ್ಯಾಸ ಮಾಡಿದೆವೆಂಬ ಒಂದು ಕಾರಣದಿಂದ ನಿನ್ನನ್ನು ಕೊಲ್ಲದೆ ಬಿಡುತ್ತಿದ್ದೇನೆ . ಈ ಸಭಾವಲಯದಲ್ಲಿ ನನ್ನನ್ನು ಹಿಯ್ಯಾಳಿಸಿದ ನಿನ್ನನ್ನು ನನ್ನ ಶಿಷ್ಯರಿಂದ ನೀನು ಬೆಚ್ಚುವಂತೆ ಕಟ್ಟಿಸದೆ ಬಿಟ್ಟರೆ ನಾನು ಮೀಸೆಯನ್ನು ಹೊತ್ತಿರುವುದು ವ್ಯರ್ಥವಲ್ಲವೆ ? ” ಎಂದು ಶಪಥ ಮಾಡಿದನು .

**V.** ೧೬.

ಕೊಡಲಿ ಕೋರೆ ಕುಡ ಕಬ್ಬಿಣ ಮೊಸರು ಬೆಣ್ಣಿ ಹಾಲಾ

ಉಪ್ಪು ಎಣ್ಣಿ ಅರಿಸಿಣ ಜೀರಗಿ ಅಕ್ಕಿಸಕ್ಕಾರಿ ಬೆಲ್ಲಾ

ಗಂಗಳ ಚೆರಗಿ ಮಂಗಳ ಸೂತ್ರ ಹೋದವು ಬೀಸುಕಲ್ಲಾ

ಹಾಳಾಗಿ ಹೋಯಿತು ಅತ್ತು ವರ್ಣಿಸಿ ಹೇಳಲಿ ನಾನೆಷ್ಟಾ

**VI.**

೧೭. ಆ] ಅದೃಷ್ಟ

೧೮. ಅ] ಮುಂದಾಳು.

೧೯. ಆ] ಪಾಪ

೨೦. ಅ] ಹಂಸ

Downloaded from scoringtarget.com